ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬ್ಯ.ಬೆಂ.ಮ.ಪಾ/ಜಂ.ಆ/ಯ.ವ/ಆ.ಅ/384/2013–14.

ಜಂಟಿ ಆಯುಕ್ತರವರ ಕಛೇರಿ
ಯಲಹಂಕ ವಲಯ ,ಬೃ.ಬೆಂ.ಮ.ಪಾ.
ಬೆಂಗಳೂರು –92 ದಿನಾಂಕ: 30/10/13

ಆಡಳಿತಾತ್ಮಕ ಅನುಮೋದನೆ

ವಿಷಯ:– **Improvements and Asphalting to Zee School Road, KNV 1st Stage and Blue Moon Garden in Ward No. 10 (Doddabommasandra), Vidyaranyapura Sub Division.**

ಉಲ್ಲೇಖ:– ಮುಖ್ಯ ಆರ್ಥಿಕ ಅಧಿಕಾರಿಯವರ ಕಾಮಗಾರಿ ಸಂಕೇತ:

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು 2013–14ನೇ ಸಾಲಿನ ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್ ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ **ಪಿ–1771,** ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಯ–ನ್ನು ಕೈಗೊಳ್ಳಲು ರೂ. 19.99 ಲಕ್ಷಗಳಿಗೆ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಮುಖ್ಯ ಆರ್ಥಿಕ ಅಧಿಕಾರಿಯವರು ಕಾಮಗಾರಿ ಸಂಕೇತ ನೀಡಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011–12 ದಿನಾಂಕ:22–07–2013ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ_____ಕ್ರ.ಸಂ384 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

30/10/13
ಜಂಟಿ ಆಯುಕ್ತರು,
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು–92

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.